## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ

## ನ್ಯಾಯಿಕ ದಂಡಧಿಕಾರಿಗಳ ನ್ಯಾಯಾಲಯ, ಕುಷ್ಟಗಿ

**ಸಿ ಸಿ ಸಂಖ್ಯೆಃ 246/2017 ಸಿಡಬ್ಲ್ಯೂ ಃ 3**

**ಪಿಡಬ್ಲ್ಯೂ ಃ 1**

**ಸಾಕ್ಷಿದಾರರ ಹೆಸರು ಃ ಮಹ್ಮದರಫಿ**

**ತಂದೆಯ ಹೆಸರು ಃ ಖಾಸೀಂಸಾಬ ಗೈಬನ್ನವರ**

**ವಯಸ್ಸು ಃ 34 ವರ್ಷ**

**ಉದ್ಯೋಗ ಃ ಚಾಲಕ**

**ವಾಸ ಃ ಕುಷ್ಟಗಿ**

**ದಿನಾಂಕಃ 14.07.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ ರವರಿಂದಃ**

1. ಈಗ ತೋರಿಸಿದ ಜಪ್ತಿ ಮಹಜರನಲ್ಲಿ ಹಾಗೂ ಸ್ಥಳ ಮಹಜರನಲ್ಲಿ ನನ್ನ ಸಹಿಗಳು ಇವೆ. ಸಾಕ್ಷಿಯು ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದರಿಂದ ಜಪ್ತಿ ಮಹಜರನ್ನು ನಿಪಿ 1 ಎಂದು ಸಹಿಯನ್ನು ನಿಪಿ 1ಎ ಎಂದು ಗುರುತಿಸಲಾಯಿತು. ಸ್ಥಳ ಮಹಜರನ್ನು ನಿಪಿ 2 ಎಂದು, ಸಹಿಯನ್ನು ನಿಪಿ 2 ಎ ಎಂದು ಗುರುತಿಸಲಾಯಿತು. ನಿಪಿ 1 ಮತ್ತು 2 ರಲ್ಲಿ ಏನು ಬರೆದಿದ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಮಾಡಿಲ್ಲ ಮತ್ತು ಏನನ್ನು ಜಪ್ತಿ ಪಡಿಸಿಕೊಂಡಿಲ್ಲ. ಪೊಲೀಸರು ಹೇಳಿದ್ದಕ್ಕೆ ಸಹಿ ಮಾಡಿರುತ್ತೇನೆ.

**( ಈ ಹಂತದಲ್ಲಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಸ.ಸ.ಅ ರವರು ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದು, ಅನುಮತಿ ನೀಡಲಾಯಿತು)**

**<u>ಪಾಟೀ ಸವಾಲುಃ ಮಾನ್ಯ ಸ.ಸ.ಅ ರವರಿಂದಃ</u>**

2. ದಿನಾಂಕ 10.02.2017 ರಂದು ಬೆಳಿಗ್ಗೆ 04.00 ಗಂಟೆಯ ಸುಮಾರಿಗೆ ಪೊಲೀಸರು ನನ್ನನ್ನು ಮತ್ತು ಚಾಸಾ 2 ರವರನ್ನು ಪಂಚರಾಗಿ ಕರೆದುಕೊಂಡು ಹೋಗಿ 04.30 ಗಂಟೆ ಸುಮಾರಿಗೆ ಕನಕದಾಸ ಸರ್ಕಲ್ ಹತ್ತಿರ 1 ರಿಂದ 3 ನೇ ಆರೋಪಿತರ ಮೇಲೆ ದಾಳಿ ಮಾಡಿ ಖಾರದ ಪುಡಿ ಮತ್ತು ರಾಡ್ ಅನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ನಿಪಿ 1 ಅನ್ನು ಬೆಳಿಗ್ಗೆ 08.00 ರಿಂದ 09.00 ಗಂಟೆಗೆ ತಯಾರಿಸಿ ನನ್ನ ಮತ್ತು ಚಾಸಾ 2 ರವರ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನಂತರ 09.30 ರಿಂದ 10.30 ಗಂಟೆ ಸಮಯದಲ್ಲಿ ನಿಪಿ 2 ರಂತೆ ಸ್ಥಳ ಪಂಚನಾಮೆ ತಯಾರಿಸಿ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.
3. ಈ ಎಲ್ಲಾ ವಿಚಾರ ನನಗೆ ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u>** ಆರೋಪಿತರ ಪರ ಶ್ರೀ  ಬಿ ಡಿ ಎ ಮತ್ತು ಸಿ ಪಿ ಪಿ ವಕೀಲರು ಪಾಟೀಸವಾಲು ಇಲ್ಲ ಎಂದು ನುಡಿದಿರುತ್ತಾರೆ.

**ಮರುವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ.ಕೇ. ಸರಿ ಇದೆ**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ. ನ್ಯಾ.ದಂಡಧಿಕಾರಿಗಳು, ಕುಷ್ಟಗಿ**